**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಿ5(2)ಪವ್ಯ.ಬ.12/2019-20** ದಿನಾಂಕ:02-01-2021

***ಅಧಿಸೂಚನೆ***

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ)ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರುಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ/ಸಹಾಯಕ ನಿರ್ದೇಶಕರು (ಬೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ: 02-01-2021 ರಂದು ನಡೆದ ಇಲಾಖಾ ಮುಂಬಡ್ತಿ ಸಭೆಯಲ್ಲಿ ಅರ್ಹ ಅಧೀಕ್ಷಕರುಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಲು ತೀರ್ಮಾನಿಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 37900-70850 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 40900-78200 ರ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಇಲಾಖಾ ಮುಂಬಡ್ತಿ ಸಮಿತಿಯ ನಿರ್ಣಯದಂತೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಈ ಅಧಿಕಾರಿಗಳಿಗೆ ಸ್ಥಳ ನಿಯುಕ್ತಿ ಆದೇಶವನ್ನು ಹೊರಡಿಸಿದ ನಂತರ ಮುಂಬಡ್ತಿ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ. ಈ ಕೆಳಕಂಡ ಅಧಿಕಾರಿಗಳಿಗೆ ಈ ಬಡ್ತಿ ಆದೇಶ ಹೊರಡಿಸಿದ 15 ದಿನಗಳ ನಂತರ ಅವರುಗಳ ಜೇಷ್ಠತೆ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆಸಿಆಸುಇ 18 ಸೇನೌವ 2014 ದಿನಾಂಕ: 06-02-2014 ರ ಅದೇಶದಂತೆ ಅಂಗವಿಕಲ ನೌಕರರಿಗೆ ಆಧ್ಯತೆ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು-1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಈ ಕೆಳಕಂಡ ನೌಕರರು ಅಂಥ ಬಡ್ತಿಯನ್ನು ಹೊಂದಲು ಇಚ್ಛಿಸದಿದ್ದರೆ, ಈ ಆದೇಶ ದಿನಾಂಕದಿಂದ [ಸದರಿ ಆದೇಶದ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್ www.schooleducation.kar.in ನಲ್ಲಿ ಪ್ರಕಟಿಸಲಾಗಿದೆ.] 07 ದಿನಗಳ ಒಳಗೆ ನೀಡಲಾದ ಬಡ್ತಿಯನ್ನು ಬಿಟ್ಟುಕೊಡಲು ನೇಮಕ ಪ್ರಾಧಿಕಾರ ಅನುಮತಿಯನ್ನು ಕೋರಿ ಲಿಖಿತ ಕೋರಿಕೆ ಸಲ್ಲಿಸುವುದು. 07ದಿನಗಳ ನಂತರ ಅಂದರೆ ದಿನಾಂಕ:08-01-21 ರ ನಂತರ ಯಾವುದೇ ಕೋರಿಕೆಯನ್ನು ಪರಿಗಣಿಸುವುದಿಲ್ಲ.

| ಕ್ರಮ ಸಂಖ್ಯೆ | ಜೇಷ್ಟತಾ ಸಂಖ್ಯೆ | ಅಧೀಕ್ಷಕರ ಹೆಸರು<br>ಶ್ರೀ / ಶ್ರೀಮತಿ |
|---|---|---|
| **ಸಾಮಾನ್ಯ ಜೇಷ್ಠತೆಯನುಸಾರ ಬಡ್ತಿ ಹೊಂದಿದ ನೌಕರರ ಹೆಸರು ಮತ್ತು ವಿಳಾಸ** | | |
| 1. | 267 | ಪುಷ್ಪಲತಾ, ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು. |

| | | |
|---|---|---|
| 2 | 298 | ಪಿ.ಎಂ. ನಿರ್ಮಲ, ಅಧೀಕ್ಷಕರು ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ. ಚಿತ್ರದುರ್ಗ. |
| 3 | 300 | ಪಿ. ಶೋಭಾದೇವಿ, ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು. |
| 4 | 301 | ಡಿ.ರಾಧಾ, ಅಧೀಕ್ಷಕರು, ರಾಜ್ಯ ಶಿಕ್ಷಣ ಸಂಶೋದನೆ ಮತ್ತು ತರಬೇತಿ ನಿರ್ದೇಶನಾಲಯ, 100 ಅಡಿ ರಿಂಗ್ ರಸ್ತೆ, ಹೊಸಕೆರೆಹಳ್ಳಿ, ಬೆಂಗಳೂರು 560085. |
| 5 | 304 | ಪಿ.ಎಂ. ಶ್ರೀಶೈಲಮೂರ್ತಿ, ಅಧೀಕ್ಷಕರು,ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉತ್ತರ ವಲಯ-1, ರಾಜಾಜಿನಗರ, ಬೆಂಗಳೂರು-10 |
| 6 | 321 | ಹೆಚ್.ಸಿ. ಶಿವಣ್ಣ, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ ಜಿಲ್ಲೆ. ಮಂಡ್ಯ. |
| 7 | 326 | ಡಿ.ಎಸ್. ಸಂಪತ್ ಕುಮಾರ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು. |
| 8 | 327 | ಡಿ.ಟಿ. ಮೀನಾಕುಮಾರಿ,ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉತ್ತರ ವಲಯ-3,ಕೆ.ಕಾಮರಾಜ ರಸ್ತೆ, ಶಿವಾಜಿನಗರ, ಬೆಂಗಳೂರು-42 |
| 9 | 359 | ಪಿ. ಲತಾ, ಅಧೀಕ್ಷಕರು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಕಛೇರಿ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು. |
| 10 | 360 | ಉಮೇಶ, ಅಧೀಕ್ಷಕರು, ಸರ್ಕಾರಿ ವಿಭಾಗೀಯ ಪಠ್ಯ ಪುಸ್ತಕ ಮಳಿಗೆ, ಬೊಮ್ಮನಹಳ್ಳಿ, ಹೊಸೂರು ರಸ್ತೆ, ಬೆಂಗಳೂರು-560068 |
| 11 | 367 | ಕೆ.ಹೆಚ್.ಚಂದ್ರಿಕಾರಾಣಿ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ. |
| 12 | 388 | ಬಿ. ಬಸವರಾಜಪ್ಪ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ. |
| 13 | 392 | ನಾರಾಯಣ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮೈಸೂರು ಉತ್ತರ ವಲಯ, ಮೈಸೂರು ಜಿಲ್ಲೆ. |
| 14 | 395 | ಎನ್.ವಿನಯ್ ಕುಮಾರ್, ಅಧೀಕ್ಷಕರು ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ ಜಿಲ್ಲೆ, |
| 15 | 398 | ಎ.ಆರ್.ರಮೇಶ್, ಅಧೀಕ್ಷಕರು ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು. |
| 16 | 400 | ಎಸ್.ವಿ.ಪ್ರಸನ್ನ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಕಾರ್ಕಳ, ತಾಲ್ಲೂಕು, ಉಡುಪಿ ಜಿಲ್ಲೆ. |
| 17 | 430 | ನಿಂಗಾನಾಯ್ಕ, ಅಧೀಕ್ಷಕರು ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ. ಚಿಕ್ಕಮಗಳೂರು. |
| 18 | 431 | ಎನ್.ಸಿ. ಕೇಶವಮೂರ್ತಿ ಅಧೀಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ. |

ಸ್ಥಾನಪನ್ನ ಬಡ್ತಿ ಹೊಂದಿದ ನೌಕರರುಗಳಿಗೆ ದಿನಾಂಕ: 12-01-2021 ರಂದು ಬೆಳಿಗ್ಗೆ 11-00 ಗಂಟೆಗೆ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇಲ್ಲಿ ಸ್ಥಳ ನಿಯುಕ್ತಿಗೆ ಕೌನ್ಸಿಲಿಂಗ್ ನಡೆಸಲಾಗುವುದು. ನೌಕರರು ನಿಗಧಿತ ದಿನಾಂಕದಂದು ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

(ವಿ.ಅನ್ಬುಕುಮಾರ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ನೃಪತುಂಗ ರಸ್ತೆ, ಬೆಂಗಳೂರು.
4) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
5) ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ನಿರ್ದೇಶಕರು, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, 100 ಅಡಿ ವರ್ತುಲ ರಸ್ತೆ, ಹೊಸಕರೆಹಳ್ಳಿ, ಬನಶಂಕರಿ, ಬೆಂಗಳೂರು.
7) ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ [ರಿ] 100 ಅಡಿ ವರ್ತುಲ ರಸ್ತೆ, ಹೊಸಕೆರೆಹಳ್ಳಿ, ಬನಶಂಕರಿ, ಬೆಂಗಳೂರು.
8) ನಿರ್ದೇಶಕರು [ಪರೀಕ್ಷೆಗಳು] ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
9) ವಿಭಾಗೀಯ ಸಹ ನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
10) ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು.
11) ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
12) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
13) ಸಂಬಂದಿಸಿದ ಎಲ್ಲಾ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರು[ಅಭಿವೃದ್ಧಿ] ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, [ಡಯಟ್]
14) ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
15) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
16) ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
17) ಈ ಅಧಿಸೂಚನೆಯನ್ನು ಇಲಾಖಾ ವೆಬ್ ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
18) ಸಂಬಂಧಿಸಿದ ಅಧೀಕ್ಷಕರುಗಳಿಗೆ.
19) ಕಛೇರಿ ಪ್ರತಿ.